**Akashvani : Bangalore**
**Regional Bulletin In Kannada**
**16.03.2025 / 14.30 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**16.03.2025 / 14.30 hrs**
**********************

ಮುಖ್ಯಾಂಶಗಳು

೧. ದೇಶದಲ್ಲಿ ೯೦ ಸಾವಿರ ಸರ್ಕಾರಿ ಶಾಲೆಗಳು ಬಂದ್ - ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕಳವಳ

೨. ಸರ್ಕಾರಿ ಕಾಮಗಾರಿಗಳ ಗುತ್ತಿಗೆಗಳಲ್ಲಿ ಮುಸ್ಲಿಂ ಸಮುದಾಯಕ್ಕೆ ಶೇಕಡ ೪ ರಷ್ಟು ಮೀಸಲು ನಿರ್ಧಾರ, ಸಂವಿಧಾನ ವಿರೋಧಿ - ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಕ್ಷೇಪ

೩. ರಾಜ್ಯದಲ್ಲಿ ಶೀಘ್ರ ೫ ಸಾವಿರ ಶಿಕ್ಷಕರ ನೇಮಕ - ಶಿಕ್ಷಣ ಸಚಿವ ಮಧು ಬಂಗಾರಪ್ಪ

೪. ಇಪ್ಪತ್ತೊಂದನೇ ಜಾನುವಾರು ಗಣತಿಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಪ್ರಥಮ ಸ್ಥಾನ

********************

ಮಾಜಿ ಸಚಿವ ದಿವಂಗತ ಕೆ.ಎಚ್.ಪಾಟೀಲ ಜನ್ಮ ಶತಮಾನೋತ್ಸವ ಕಾರ್ಯಕ್ರಮನ್ನು ಗದಗದಲ್ಲಿಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಕೇಂದ್ರೀಯ ವಿದ್ಯಾಲಯ, ವಿಶ್ವವಿದ್ಯಾಲಯಗಳಲ್ಲಿ ಶೇಕಡ ೫೦ ರಷ್ಟು ಹುದ್ದೆಗಳು ಖಾಲಿ ಇವೆ. ಹೈದ್ರಾಬಾದ್ ಕರ್ನಾಟಕದ ಭಾಗದಲ್ಲಿ ೩೭ ಸಾವಿರ ಹುದ್ದೆಗಳು ಖಾಲಿ ಇವೆ. ಕೇಂದ್ರ ಸರ್ಕಾರವು ಕರ್ನಾಟಕಕ್ಕೆ ಸರಿಯಾಗಿ ಅನುದಾನ ನೀಡುತ್ತಿಲ್ಲ ಎಂದು ಆರೋಪಿಸಿದರು.

ದೇಶದಲ್ಲಿ ೯೦ ಸಾವಿರ ಸರ್ಕಾರಿ ಶಾಲೆಗಳು ಬಂದ್ ಆಗಿವೆ. ಬಿಹಾರ ಮತ್ತು ಉತ್ತರ ಪ್ರದೇಶದಲ್ಲೇ ೫೦ ಸಾವಿರ ಶಿಕ್ಷಣ ಸಂಸ್ಥೆಗಳು ಬಂದ್ ಆಗಿವೆ. ಸರ್ಕಾರಿ ಶಾಲೆಗಳು ಬಂದ್ ಆದರೆ, ಬಡ ಮಕ್ಕಳ ಪರಸ್ಥಿತಿ ಹೇಗೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕಳವಳ ವ್ಯಕ್ತಪಡಿಸಿದರು.

ಧ್ವನಿ: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ

********************

ಇತ್ತೀಚೆಗೆ ಮಂಡಿಸಿದ ರಾಜ್ಯ ಆಯ್ಯವ್ಯಯದಲ್ಲಿ ಕಾಮಗಾರಿಗಳ ಗುತ್ತಿಗೆಗಳಲ್ಲಿ ಮುಸ್ಲಿಂ ಸಮುದಾಯಕ್ಕೆ ಶೇಖಡ ೪ ರಷ್ಟು ಮೀಸಲು ಕಲ್ಪಸಿರುವುದು ಸಂವಿಧಾನ ವಿರೋಧಿ ನಿರ್ಧಾರವಾಗಿದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಆಕ್ಷೇಪಿಸಿದ್ದಾರೆ.

ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತಾಡಿದ ಅವರು, ಧರ್ಮದ ಆಧಾರದ ಮೀಸಲು ಕಲ್ಪಿಸುವುದರ ಮೂಲಕ ಧರ್ಮ-ಧರ್ಮಗಳ ಮಧ್ಯ ವಿಷ ಬಿತ್ತಿ, ಕಂದಕ ಮೂಡಿಸಲು ಅವಕಾಶ ಕಲ್ಪಸಿರುವುದು

ದುರ್ದೈವದ ಸಂಗತಿ. ಇದನ್ನು ವಿರೋಧಿಸಿ ಸದನದ ಒಳಗಡೆ ಹಾಗೂ ಹೊರಗಡೆ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು.

ಅಲ್ಪಸಂಖ್ಯಾತರ ತುಷ್ಟಿಕರಣಕ್ಕೆ ಇಳಿದಿರುವ ರಾಜ್ಯ ಕಾಂಗ್ರೆಸ್ ಸರ್ಕಾರ, ಕಿತ್ತೂರು ಚನ್ನಮ್ಮ ಪ್ರಾಧಿಕಾರ ಸೇರಿದಂತೆ ಯಾವುದೇ ಪ್ರಾಧಿಕಾರಗಳಿಗೆ ಹಣಕಾಸಿನ ನೆರವು ನೀಡುತ್ತಿಲ್ಲ ಎಂದು ಆರೋಪಿಸಿದ ಅವರು, ಉತ್ತರ ಕರ್ನಾಟದ ಅಭಿವೃದ್ಧಿಯ ನಿರ್ಲಕ್ಷತೆಯ ಬಗ್ಗೆ ಸದನದಲ್ಲಿ ಚರ್ಚಿಸಲಾಗುವುದು ಎಂದು ಬಿ.ವೈ.ವಿಜಯೇಂದ್ರ ಹೇಳಿದರು.

********************

ಇಂದಿನ ಯಾಂತ್ರೀಕೃತ ಹಾಗೂ ತಂತ್ರಜ್ಞಾನ ಜೀವನದಲ್ಲಿ ಭಾವನೆಗಳು ಹಾಗೂ ಸಂಬಂಧಗಳು ಮರೆಯಾಗುತ್ತಿರುವುದು ಬೇಸರದ ಸಂಗತಿ. ಜನ್ಮ ನೀಡಿದ ತಂದೆ-ತಾಯಂದಿರನ್ನೇ ಅನಾಥರನ್ನಾಗಿ ಮಾಡುತ್ತಿರುವ ಪರಿಪಾಠ ಹೆಚ್ಚಾಗಿದೆ. ಇಂಥ ಅಮಾನವೀಯ ಕೃತ್ಯಗಳನ್ನು ತಡೆಯಲು ವೈದ್ಯಕೀಯ ಶಿಕ್ಷಣ ಇಲಾಖೆ ಮುಂದಾಗಿದೆ.

ರಾಜ್ಯದಲ್ಲಿ ಇತ್ತೀಚೆಗೆ ವೃದ್ಧ ಪೋಷಕರನ್ನು ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಬಿಟ್ಟು ಹೋಗುತ್ತಿರುವ ಉದಾಹರಣೆಗಳು ಹೆಚ್ಚಾಗಿದೆ. ಆಸ್ತಿಯನ್ನು ತಮ್ಮ ಹೆಸರಿಗೆ ಬರೆಯಿಸಿಕೊಂಡ ನಂತರ, ಪೋಷಕರನ್ನು ಚಿಕಿತ್ಸೆ ನೆಪದಲ್ಲಿ ಆಸ್ಪತ್ರೆಯಲ್ಲಿ ಬಿಟ್ಟು ಮಕ್ಕಳು ನಾಪತ್ತೆಯಾಗುತ್ತಿದ್ದಾರೆ.

ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಒಂದರಲ್ಲೇ, ೧೫೦ಕ್ಕೂ ಹೆಚ್ಚು ಹಿರಿಯ ನಾಗರಿಕರನ್ನು ಮಕ್ಕಳು ತೊರೆದ ಪ್ರಕರಣಗಳು ವರದಿಯಾಗಿವೆ. ರಾಜ್ಯಾದ್ಯಂತ ಇತರೆ ವೈದ್ಯಕೀಯ ಸಂಸ್ಥೆಗಳಲ್ಲಿ ಇಂಥ ೧೦೦ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿವೆ.

ಈ ಕುರಿತು ಕಳವಳ ವ್ಯಕ್ತಪಡಿಸಿರುವ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್, ಈ ಕುರಿತ ಪ್ರಕರಣಗಳು ಕಂಡುಬಂದ ಕೂಡಲೇ ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಕಂದಾಯ ಉಪವಿಭಾಗದ ಸಹಾಯಕ ಆಯುಕ್ತರಿಗೆ ದೂರು ಸಲ್ಲಿಸುವಂತೆ ಸೂಚನೆ ನೀಡಿದ್ದಾರೆ.

ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ, ೨೦೦೭ ರ ಸೆಕ್ಷನ್ ೨೩ ರ ಪ್ರಕಾರ, ಮಕ್ಕಳು ಆಸ್ತಿಯನ್ನು ಆನುವಂಶಿಕವಾಗಿ ಪಡೆದ ನಂತರ ಹೆತ್ತವರನ್ನು ನಿರ್ಲಕ್ಷಿಸಿದರೆ ಅಥವಾ ತ್ಯಜಿಸಿದರೆ, ವಿಲ್ ಅಥವಾ ಆಸ್ತಿ ವರ್ಗಾವಣೆಯನ್ನು ರದ್ದುಗೊಳಿಸಲು ಮತ್ತು ವಯಸ್ಸಾದ ಪೋಷಕರಿಗೆ ಮಾಲೀಕತ್ವವನ್ನು ಪುನಃ ಪಡೆಯಲು ಕಾಯ್ದೆಯಲ್ಲಿ ಅನುಮತಿ ಇದೆ ಎಂದು ಸಚಿವರು ಹೇಳಿದರು.

********************

ಕಲ್ಯಾಣ ಕರ್ನಾಟಕ ಭಾಗದಲ್ಲಿ ೧ ಸಾವಿರ ೮೦೦ ಶಿಕ್ಷಕರು ಸೇರಿದಂತೆ ಒಟ್ಟಾರೆ ರಾಜ್ಯದಲ್ಲಿ ೫ ಸಾವಿರ ಶಿಕ್ಷಕರ ನೇಮಕ ಮಾಡಿಕೊಳ್ಳಲಾಗುವುದು ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಹಾವೇರಿ ಜಿಲ್ಲೆ ಬ್ಯಾಡಗಿ ತಾಲೂಕಿನ ಕೆರವಡಿ ಗ್ರಾಮದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಶತಮಾನೋತ್ಸವ ಹಾಗೂ ಗುರುವಂದನೆ ಮತ್ತು ಸ್ನೇಹ ಸಮ್ಮಿಲನದ ಅಂಗವಾಗಿ ಏರ್ಪಡಿಸಿದ್ದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಆಯವ್ಯಯದಲ್ಲಿ ಶಿಕ್ಷಣ ಇಲಾಖೆಗೆ ೪೫ ಸಾವಿರ ಕೋಟಿ ರೂಪಾಯಿ ಮೀಸಲಿಡಲಾಗಿದೆ ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

********************

೨೧ನೇ ಜಾನುವಾರು ಗಣತಿ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ರಾಜ್ಯದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯು ಪ್ರಥಮ ಸ್ಥಾನ ಪಡೆದಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸುಮಾರು ೨ ಲಕ್ಷದ ೯೦ ಸಾವಿರದ ೫೫೧ ರೈತರು ಪಶುಸಂಗೋಪನೆಯಲ್ಲಿ ತೊಡಗಿಕೊಂಡಿದ್ದಾರೆ. ಪಶು ಇಲಾಖೆಯಲ್ಲಿ ಒಟ್ಟು ೧೦೫ ಪಶು ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ೨೧ನೇ ಜಾನುವಾರು ಗಣತಿ ಪ್ರಕಾರ, ೧ ಲಕ್ಷದ ೭೦ ಸಾವಿರದ ೭೨೦ ದನಗಳು, ೧೪ ಸಾವಿರದ ೯೨೪ ಎಮ್ಮೆಗಳು, ೧ ಲಕ್ಷದ ೧೭ ಸಾವಿರದ ೭೧೫ ಕುರಿಗಳು, ೯೫ ಸಾವಿರ ಮೇಕೆಗಳು ಜಿಲ್ಲೆಯಲ್ಲಿದೆ. ೨ ಲಕ್ಷದ ೯೩ ಸಾವಿರದ ೮೭೬ ಜಾನುವಾರುಗಳಿಗೆ ಕಾಲು ಬಾಯಿ ಲಸಿಕೆಯನ್ನು ನೀಡಲಾಗಿದೆ ಎಂದು ಪಶು ಸಂಗೋಪನೆ ಹಾಗೂ ಪಶುವೈದ್ಯಕೀಯ ಸೇವಾ ಇಲಾಖೆಯ ಜಿಲ್ಲಾ ಉಪನಿರ್ದೇಶಕ ಜಗದೀಶ್ ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ೫.೫ ಲಕ್ಷ ಲೀಟರ್ ಹಾಲು ಉತ್ಪಾದನೆ ಆಗುತ್ತಿದೆ. ಜಾನುವಾರು ವಿಮೆ ಸೌಲಭ್ಯವನ್ನು ಎ.ಪಿ.ಎಲ್ ಪಡಿತರ ಚೀಟಿಗೆ ಶೇಖಡ ೫೦ ರಷ್ಟು, ಬಿ.ಪಿ.ಎಲ್ ಪಡಿತರ ಚೀಟಿಗೆ ಶೇಖಡ ೭೫ ರಷ್ಟು ನೀಡಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

********************

ಅನ್ನದಾತರು ಸ್ಥಾಪಿಸಿರುವ ರೈತ ಉತ್ಪಾದಕ ಸಂಸ್ಥೆಗಳ ಅಭಿವೃದ್ಧಿಗೆ ರಾಜ್ಯ ಸರಕಾರದಿಂದ ಸಕಲ ಸಹಕಾರ ಮತ್ತು ನೆರವು ಒದಗಿಸುವುದಾಗಿ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ವಿಜಯಪುರ ಜಿಲ್ಲೆಯ ತಿಕೋಟಾ ತಾಲೂಕಿನ ಟಕ್ಕಳಕಿ ಗ್ರಾಮದಲ್ಲಿ ಬಿಜಾಪುರ ತೋಟಗಾರಿಕೆ ರೈತರ ಉತ್ಪಾದಕರ ಕಂಪನಿ ನಿಯಮಿತ ವತಿಯಿಂದ ಆಯೋಜಿಸಲಾದ ರೈತ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಆಹಾರ ಸಂಸ್ಕರಣಾ ಘಟಕಗಳಿಂದ ರೈತರಿಗೆ ಹೆಚ್ಚಿನ ಲಾಭ ಸಿಗುತ್ತದೆ.  ಉದ್ಯೋಗವೂ ಸೃಷ್ಟಿಯಾಗುತ್ತದೆ.  ಈ ಹಿನ್ನೆಲೆಯಲ್ಲಿ ಇಂಥ ಎಫ್.ಪಿ.ಓ ಗಳ ಅಭಿವೃದ್ಧಿಗೆ ಕೇಂದ್ರ ಮತ್ತು ರಾಜ್ಯ ಸರಕಾರಗಳಿಂದ ಸಕಲ ನೆರವು ಒದಗಿಸಲಾಗುವುದು ಎಂದರು.

********************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಅಖಿಲ ಭಾರತೀಯ ಸಾಹಿತ್ಯ ಪರಿಷತ್‌ನ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಮಿತಿ ವತಿಯಿಂದ ಕವಿ ದ.ರಾ.ಬೇಂದ್ರೆಯವರ ನಾಕುತಂತಿ ಷಷ್ಟಿಪೂರ್ತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಅಖಿಲ ಭಾರತೀಯ ಸಾಹಿತ್ಯ ಪರಿಷತ್, ಬೆಂಗಳೂರು ನಗರ ಘಟಕದ ಅಧ್ಯಕ್ಷ ಹಾಗೂ ಹಾಸ್ಯ ಬರಹಗಾರ ಎಂ.ಎಸ್.ನರಸಿಂಹಮೂರ್ತಿ ಮಾತನಾಡಿ, ಕವಿಯೊಬ್ಬರ ಕೃತಿಯ ಷಷ್ಟಿಪೂರ್ತಿ ಕಾರ್ಯಕ್ರಮ ಮಾಡುತ್ತಿರುವುದು ಇದೇ ಪ್ರಥಮ. ಪ್ರತಿ ತಿಂಗಳು ನಾಕುತಂತಿ ಕೃತಿಯ ಬಗ್ಗೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ದ.ರಾ.ಬೇಂದ್ರೆಯವರ ಕೃತಿಗಳಲ್ಲಿ ಬದುಕಿನ ಸಂವೇದನೆಗಳು ಹಾಸುಹೊಕ್ಕಾಗಿದ್ದು, ಜನಸಾಮಾನ್ಯರಿಗೆ ಬೇಂದ್ರೆಯವರ ಕೃತಿಗಳ ಅರಿವು ಮೂಡಿಸಬೇಕಿದೆ ಎಂದು ಹೇಳಿದರು.

ಕಾದಂಬರಿಕಾರ ಡಾ.ಜಿ.ಬಿ.ಹರೀಶ್, ಬೇಂದ್ರೆಯವರ ನಾಕುತಂತಿ ಕೃತಿಯನ್ನು ವಿಶ್ಲೇಷಿಸಿ, ಕೃತಿಯಲ್ಲಿ, ಜ್ಞಾನ, ಸಂಸ್ಕೃತಿ, ಆಧ್ಯಾತ್ಮ, ಕನ್ನಡ ಪ್ರೇಮ, ಬದುಕಿನ ಮೌಲ್ಯಗಳು ಎಲ್ಲವೂ ಮೇಳೈಸಿವೆ ಎಂದು ಹೇಳಿದರು.

********************

ಜಪಾನ್ ಭಾಷೆಯ ಕಲಿಕೆಯ ಅವಕಾಶ ಬಳಸಿಕೊಂಡು, ಉನ್ನತ ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಪ್ರಗತಿ ಸಾಧಿಸುವಂತೆ ಬೆಂಗಳೂರಿನಲ್ಲಿರುವ ಜಪಾನ್ ಕಾನ್ಸುಲೇಟ್ ಜನರಲ್ ನಾಕಾನೆ, ವಿದ್ಯಾರ್ಥಿಗಳಿಗೆ ಆಹ್ವಾನಿಸಿದ್ದಾರೆ.

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಜಾಗತಿಕ ಭಾಷೆಗಳ ಕೇಂದ್ರದಲ್ಲಿ ಏರ್ಪಡಿದ್ದ ಜಪಾನ್‌ನಲ್ಲಿ ಉದ್ಯೋಗ ಅವಕಾಶಗಳ ಕುರಿತ ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, ಭಾರತ ಮತ್ತು ಜಪಾನ್ ದೇಶಗಳು ಸುದೀರ್ಘ ಸಾಂಸ್ಕೃತಿಕ ವಿನಿಮಯ ಪರಂಪರೆಯನ್ನು ಹೊಂದಿದ್ದು, ಪ್ರಸ್ತುತ ಸಂದರ್ಭದಲ್ಲಿ ಆರ್ಥಿಕ ಮತ್ತು ಶೈಕ್ಷಣಿಕ ಸಹಕಾರದ ಹೊಸ ಅವಕಾಶಗಳು ತೆರೆದುಕೊಂಡಿವೆ ಎಂದರು.

ಆನ್‌ಲೈನ್ ಮೂಲಕ ವಿಚಾರ ಸಂಕಿರಣದಲ್ಲಿ ಪಾಲ್ಗೊಂಡ ಜಪಾನ್ ವಿದೇಶಾಂಗ ಸಚಿವಾಲಯದ ಸಲಹೆಗಾರ ಪ್ರೊ.ಅಶೋಕ್ ಕುಮಾರ್ ಚಾವ್ಲಾ ಮಾತನಾಡಿ, ಮಾನವ ಸಂಪನ್ಮೂಲ ವಿಭಾಗದಲ್ಲಿ ಭಾರತ ಉತ್ತಮ ಭವಿಷ್ಯ ಹೊಂದಿದೆ. ಜನಸಂಖ್ಯಾ ಬಿಕ್ಕಟ್ಟಿನಲ್ಲಿರುವ ಜಪಾನ್, ಭಾರತದ ಪ್ರತಿಭಾವಂತರಿಗೆ ಹೆಬ್ಬಾಗಿಲಾಗಿದೆ ಎಂದು ಹೇಳಿದರು.

**********ಮುಕ್ತಾಯ**********